ಕರ್ನಾಟಕ ಸರ್ಕಾರದ ನಡವಳಿ

ವಿಷಯ: 2016–17 ಮತ್ತು 2017–2018ನೇ ಸಾಲಿನ ಆಯವ್ಯಯದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹೊಸದಾಗಿ ಸೇರ್ಪಡೆಗೊಂಡ ನಗರಸಭೆ ಮತ್ತು ಪುರಸಭೆ ಪ್ರದೇಶಗಳ ಅಭಿವೃದ್ಧಿಗಾಗಿ ಘೋಷಿಸಿರುವ ವಿಶೇಷ ಅನುದಾನದಲ್ಲಿ ಯಲಹಂಕ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕೈಗೊಳ್ಳುವ "Providing open gym at Yelahanka Lake in Ward No.01ರ" ಕಾಮಗಾರಿಗೆ ಅಡಳಿತಾತ್ಮಕ ಹಾಗೂ ಟೆಂಡರ್‌ಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ನಅಇ 199 ಎಸ್‌ಎಫ್‌ಸಿ 2016 (ಭಾಗ–1), ದಿನಾಂಕ: 21–06–2016.
2. ಸರ್ಕಾರದ ಪತ್ರ ಸಂಖ್ಯೆ: ನಅಇ 175 ಎಸ್‌ಎಫ್‌ಸಿ 2016, ದಿನಾಂಕ: 06–04–2016.
3. ಸರ್ಕಾರದ ಆದೇಶ ಸಂಖ್ಯೆ: ನಅಇ 175 ಎಸ್‌ಎಫ್‌ಸಿ 2016, ದಿನಾಂಕ: 20–04–2017.
4. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಆಯುಕ್ತರು/ಪಿಆರ್/3739/2017–18, ದಿನಾಂಕ: 05–09–2017.
5. ದಿನಾಂಕ: 16–10–2017 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿ.

DM ಕಾಂಡಲಿ ಗುತ್ತಿಗೆ ಕಾಮಗಾರಿ LOI ಸಹಿ 2/11

* * * * *

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ದಿನಾಂಕ: 21–06–2016ರ ಆದೇಶದಲ್ಲಿ, 2016–17 ಮತ್ತು 2017–18ನೇ ಸಾಲಿನಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ವಿವಿಧ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ರೂ.7300.00 ಕೋಟಿಗಳ ಅಂದಾಜು ವೆಚ್ಚದ ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿರುತ್ತದೆ. ಸದರಿ ಆದೇಶದ ಕ್ರಮ ಸಂಖ್ಯೆ(11)ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹೊಸದಾಗಿ ಸೇರಿಸಲಾದ 110 ಹಳ್ಳಿಗಳ ಅಭಿವೃದ್ಧಿಗಾಗಿ ರೂ.250.00 ಕೋಟಿಗಳನ್ನು ನಿಗಧಿಪಡಿಸಲಾಗಿರುತ್ತದೆ.

2. ಮೇಲೆ (2) ರಲ್ಲಿ ಓದಲಾದ ದಿನಾಂಕ: 06–04–2016ರ ಸರ್ಕಾರದ ಪತ್ರದೊಂದಿಗೆ ಮಾನ್ಯ ಬೆಂಗಳೂರು ಅಭಿವೃದ್ಧಿ ಹಾಗೂ ನಗರ ಯೋಜನಾ ಸಚಿವರ ದಿನಾಂಕ: 02–04–2016ರ ಟಿಪ್ಪಣಿಯ ಪ್ರತಿಯನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರಿಗೆ ಕಳುಹಿಸಿ ಸದರಿ ಟಿಪ್ಪಣಿಯಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹೊಸದಾಗಿ ಸೇರ್ಪಡೆಗೊಂಡಿರುವ ನಗರಸಭೆ ಮತ್ತು ಪುರಸಭೆ ಪ್ರದೇಶಗಳ ಅಭಿವೃದ್ಧಿಗೆ 2016–17ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವ ರೂ.250.00 ಕೋಟಿಗಳ ವೆಚ್ಚದಲ್ಲಿ ಕೈಗೊಳ್ಳುವ ಕಾಮಗಾರಿಗಳಿಗೆ ಕ್ರಿಯಾ ಯೋಜನೆಯನ್ನು ರೂಪಿಸಿ ಸರ್ಕಾರದ ಅನುಮೋದನೆಗೆ ಸಲ್ಲಿಸುವಂತೆ ಸೂಚಿಸಲಾಗಿತ್ತು.

3. ಮೇಲೆ (3) ರಲ್ಲಿ ಓದಲಾದ ದಿನಾಂಕ: 20–04–2017ರ ಆದೇಶದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರ ಪ್ರಸ್ತಾವನೆಯಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಗೆ ಹೊಸದಾಗಿ ಸೇರಿಸಲ್ಪಟ್ಟ 110 ಹಳ್ಳಿಗಳ ಅಭಿವೃದ್ಧಿಗಾಗಿ ನಿಗಧಿಪಡಿಸಿರುವ ರೂ.250.00 ಕೋಟಿಗಳ ಅನುದಾನದಿಂದ ಯಲಹಂಕ

ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಒಟ್ಟು ರೂ.10.00 ಕೋಟಿಗಳ ವೆಚ್ಚದಲ್ಲಿ ಕೈಗೊಳ್ಳುವ ಒಟ್ಟು 15 ಕಾಮಗಾರಿಗಳ ಕ್ರಿಯಾ ಯೋಜನೆಗೆ ಕೆಲವೊಂದು ಷರತ್ತುಗಳನ್ನು ವಿಧಿಸಿ ಅನುಮೋದನೆ ನೀಡಲಾಗಿದ್ದು, ಸದರಿ ಆದೇಶದ ಕ್ರಮ ಸಂಖ್ಯೆ: 06 ರಲ್ಲಿ "Providing open gym at Yelahanka Lake in Ward No.01ರ" ಕಾಮಗಾರಿಗೆ ರೂ.50.00 ಲಕ್ಷಗಳ ಅನುದಾನವನ್ನು ನಿಗಧಿಪಡಿಸಲಾಗಿರುತ್ತದೆ.

4. ಮೇಲೆ (4) ರಲ್ಲಿ ಓದಲಾದ ದಿನಾಂಕ: 05–09–2017 ಪತ್ರದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು ಸರ್ಕಾರದ ಆದೇಶ ಸಂಖ್ಯೆ: ನಅಇ 175 ಎಸ್ಎಫ್ಸಿ 2016, ದಿನಾಂಕ: 20–04–2017ರ ಕ್ರಿಯಾ ಯೋಜನೆಯಲ್ಲಿ 01 ರಿಂದ 15 ರಲ್ಲಿನ ಕಾಮಗಾರಿಗಳಿಗೆ ಒಟ್ಟು ರೂ.1000.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿರುತ್ತದೆ. ಅದರಂತೆ ಆದೇಶದ ಕ್ರಮ ಸಂಖ್ಯೆ: 06 ರಲ್ಲಿ "Providing open gym at Yelahanka Lake in Ward No.01ರ" ಕಾಮಗಾರಿಗೆ 2016–17ನೇ ಸಾಲಿಗೆ ಅಂದಾಜು ಪಟ್ಟಿಗಳನ್ನು ತಯಾರಿಸಿ ಏಕ ಲಕೋಟೆ ಪದ್ಧತಿಯಲ್ಲಿ ರೂ.49.99 ಲಕ್ಷಗಳಿಗೆ ಟೆಂಡರ್‌ನ್ನು ದಿನಾಂಕ: 05–08–2017 ರಂದು ಇ–ಪ್ರಕ್ಯೂರಡಿಯಲ್ಲಿ ಆಹ್ವಾನಿಸಲಾಗಿರುತ್ತದೆ. ಸದರಿ ಟೆಂಡರ್ ಅನ್ನು ದಿನಾಂಕ: 21–08–2017 ರಂದು ತೆರೆಯಲಾಗಿದ್ದು, ಇಬ್ಬರು ಗುತ್ತಿಗೆದಾರರು ಭಾಗವಹಿಸಿರುತ್ತಾರೆ. KW-3ರ ನಿಬಂಧನೆಗಳಂತೆ ಇಬ್ಬರು ಗುತ್ತಿಗೆದಾರರು ತಾಂತ್ರಿಕವಾಗಿ ಅರ್ಹರಾಗಿರುತ್ತಾರೆ. ಸದರಿಯವರುಗಳ ವಿವರಗಳು ಈ ಕೆಳಕಂಡಂತೆ ಇರುತ್ತವೆ.

ಕ್ರ ಸಂ.	ತಾಂತ್ರಿಕ ಮೌಲ್ಯ ಮಾಪನದಲ್ಲಿ ಅರ್ಹರಾದ ಗುತ್ತಿಗೆದಾರರು	ಅಂದಾಜು ಮೊತ್ತ ಮೊತ್ತ (ರೂ.ಲಕ್ಷಗಳಲ್ಲಿ)	ಟೆಂಡರ್‌ಗಿಟ್ಟ ಮೊತ್ತ (ರೂ.ಲಕ್ಷಗಳಲ್ಲಿ)	ಟೆಂಡರ್‌ನಲ್ಲಿ ನಮೂದಿಸಿರುವ ಮೊತ್ತ (ರೂ.ಲಕ್ಷಗಳಲ್ಲಿ)	ಟೆಂಡರ್ ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ (ಶೇ.)
1	Sri. D.K Nagaraja	50.00	49,99,298.64	52,36,244.36	ಶೇ.4.73% ರಷ್ಟು ಹೆಚ್ಚು (L-1)
2	Sri. K.V Krishna Reddy			53,24,389.91	ಶೇ.6.50% ರಷ್ಟು ಹೆಚ್ಚು (L-2)

6. ಮೇಲ್ಕಂಡ ಕಾಮಗಾರಿಗೆ ಸಂಬಂಧಪಟ್ಟಂತೆ ಎಲ್–1 ಗುತ್ತಿಗೆದಾರರಾದ Sri. D.K Nagaraja ರವರು ನಮೂದಿಸಿರುವ ಮೊತ್ತ ರೂ. 52,36,244.36/- ಗಳಾಗಿರುತ್ತದೆ. ಸದರಿ ಮೊತ್ತವನ್ನು ಅನುಮೋದಿತ ಅಂದಾಜು ಮೊತ್ತಕ್ಕೆ ಹೋಲಿಸಿದಾಗ ಟೆಂಡರ್ ದರವು ಶೇ.4.73% ರಷ್ಟು ಹೆಚ್ಚು ಇದ್ದು, ಟೆಂಡರ್‌ಗೆ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

7. ಮೇಲೆ (5) ರಲ್ಲಿ ಓದಲಾದ ದಿನಾಂಕ: 16–10–2017 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ ವಿಷಯವನ್ನು ಚರ್ಚಿಸಿ ನಿರ್ಣಯಿಸಿದಂತೆ ಈ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ನಅಇ 582 ಎಂಎನ್‌ವೈ 2017,
ಬೆಂಗಳೂರು, ದಿನಾಂಕ: 28–11–2017.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, 2016–17 ಮತ್ತು 2017–2018ನೇ ಸಾಲಿನ ಆಯವ್ಯಯದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹೊಸದಾಗಿ ಸೇರ್ಪಡೆಗೊಂಡ ನಗರಸಭೆ ಮತ್ತು ಪುರಸಭೆ ಪ್ರದೇಶಗಳ

ಅಭಿವೃದ್ಧಿಗಾಗಿ ಘೋಷಿಸಿರುವ ವಿಶೇಷ ಅನುದಾನದಲ್ಲಿ ಯಲಹಂಕ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕೈಗೊಳ್ಳುವ "Providing open gym at Yelahanka Lake in Ward No.01ರ" ಕಾಮಗಾರಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 175 ಎಸ್ಎಫ್ಸಿ 2016, ದಿನಾಂಕ: 20–04–2017ರ ಆದೇಶದ ಕ್ರಿಯಾ ಯೋಜನೆಯಲ್ಲಿ ಅನುಮೋದನೆಗೊಂಡಿರುವ ಕ್ರಮ ಸಂಖ್ಯೆ: 06 ರಲ್ಲಿನ ಕಾಮಗಾರಿಯ ಅಂದಾಜು ಮೊತ್ತ ರೂ.50.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ಅಧಿಕಾರಯುಕ್ತ ಸಮಿತಿಯು ಎಲ್–1 ಗುತ್ತಿಗೆದಾರರಾದ Sri. D.K Nagaraja ಇವರು ನಮೂದಿಸಿರುವ ಅಂತಿಮ ಮೊತ್ತ ರೂ. 0.51992/- ಗಳು ಟೆಂಡರ್‌ಗಿಟ್ಟ ಮೊತ್ತ ಹಾಗೂ 2016–17ನೇ ಸಾಲಿನ ದರಗಳಿಗೆ ಹೋಲಿಸಿದಾಗ ಶೇಕಡಾ 4 % ರಷ್ಟು ಹೆಚ್ಚಿನ ದರಗಳಿಗೆ ಮಿತಿಗೊಳಿಸಿ, ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಟೆಂಡರ್‌ಗೆ ಸರ್ಕಾರದ ಅನುಮೋದನೆ ನೀಡಿದೆ.

1. ಮೇಲಿನ ಕಾಮಗಾರಿಯನ್ನು ಕೆ.ಟಿ.ಪಿ.ಪಿ. ಕಾಯ್ದೆ/ನಿಯಮಗಳು ಹಾಗೂ ಎಲ್ಲಾ ಚಾಲ್ತಿ ನಿಯಮಗಳನ್ನು ಪಾಲಿಸಿಕೊಂಡು ಅನುಷ್ಠಾನಗೊಳಿಸುವುದು.
2. ಈ ಕಾಮಗಾರಿಗೆ ತಗಲುವ ವೆಚ್ಚವನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 199 ಎಸ್ಎಫ್ಸಿ 2016 (ಭಾಗ–1), ದಿನಾಂಕ: 21–06–2016 ರಲ್ಲಿ 2016–17ನೇ ಸಾಲಿನಲ್ಲಿ ಮೀಸಲಿಟ್ಟ ನಗರೋತ್ಥಾನ ಯೋಜನೆಯ ಅನುದಾನದಿಂದ ಭರಿಸುವುದು ಹಾಗೂ ಹೆಚ್ಚುವರಿ ಟೆಂಡರ್ ಪ್ರೀಮಿಯಂ ಮೊತ್ತವನ್ನು ಪಾಲಿಕೆಯು ತನ್ನ ಸ್ವಂತ ನಿಧಿಯಿಂದಲೇ ಭರಿಸತಕ್ಕದ್ದು.
3. ಮೇಲಿನ ಕಾಮಗಾರಿಯನ್ನು ಸರ್ಕಾರದಿಂದ ಮಂಜೂರಾದ ಮೊತ್ತದ ಮಿತಿಯಲ್ಲಿಯೇ ಯಾವುದೇ ಹೆಚ್ಚುವರಿಯಾಗದಂತೆ ಅನುಷ್ಠಾನಗೊಳಿಸಲು ಕ್ರಮವಹಿಸತಕ್ಕದ್ದು.
4. ಸರ್ಕಾರವು ಕಾಮಗಾರಿಗಳಿಗೆ ಆಡಳಿತಾತ್ಮಕ ಮತ್ತು ಟೆಂಡರ್‌ಗಳಿಗೆ ಅನುಮೋದನೆ ನೀಡಿದ್ದಾಗ್ಯೂ ಸಹ ಕಾಮಗಾರಿಯು ಪುನರಾವರ್ತನೆ ಆಗದಂತೆ ನೋಡಿಕೊಳ್ಳತಕ್ಕದ್ದು. ಅನುಮೊದನೆಗೊಂಡಿರುವ ಕಾಮಗಾರಿಯನ್ನಲ್ಲದೆ ಯಾವುದೇ ಕಾರಣಕ್ಕೆ ಬೇರೆ ಕಾಮಗಾರಿಗಳನ್ನು ಕೈಗೊಳ್ಳಬಾರದೆಂದು ತಿಳಿಸಿದೆ.
5. ಮೇಲಿನ ಕಾಮಗಾರಿಗೆ 3rd Party Quality Monitors ಗಳನ್ನು ನೇಮಿಸಿಕೊಂಡು ಉತ್ತಮ ಗುಣಮಟ್ಟದಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕ್ರಮವಹಿಸತಕ್ಕದ್ದು.
6. ದಿನಾಂಕ: 16--10–2017ರ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಯಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ತಪ್ಪದೆ ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ. ವಿಕೇಶ್ ಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

ಇವರಿಗೆ:

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.

..4..

4. ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
5. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ 3 ಮತ್ತು 9) ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
11. ಸರ್ಕಾರದ ಉಪ ಕಾರ್ಯದರ್ಶಿಗಳು–3 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
12. ಅಧೀಕ್ಷಕ ಅಭಿಯಂತರರು (ತಾಂತ್ರಿಕ ಕೋಶ), ನಗರಾಭಿವೃದ್ಧಿ ಇಲಾಖೆ.
13. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.